# ನಾ ಚುನಾವಣೆಗೆ ನಿಂತರೆ...

ಬ್ರೆಕಫಾಸ್ಟ ಮುಗಿಸಿ ಬಾಲ್ಕನಿಯಲ್ಲಿ ನಿಂತು ಹಸಿರು ಗಾರ್ಡನಿನಲ್ಲಿ ಬಂದು ಚಿಲಿಪಿಲಿ ಎನ್ನುತ್ತಿರುವ ಹಕ್ಕಿ ಪಕ್ಕಿಗಳ ನೋಡುತ್ತಿದ್ದೆ. "ಕೀಈಈಈಈಈಈ ರ್..." ಅನ್ನುವ ದನಿಯೊಂದಿಗೆ ಧ್ವನಿವರ್ಧಕವೊಂದು ಶುರುವಿಟ್ಟುಕೊಂಡಿತು, ಹಕ್ಕಿಗಳು ಹಾರಿಹೋದವು. "ಬಡವರ ಬಂಧು, ದೀನ ದಲಿತರ ಹಿತರಕ್ಷಕ, ಕಾಯಕಯೋಗಿ, ಸಮಾಜಸೇವಕ ****ಅವರಿಗೆ ತಮ್ಮ ಅತ್ಯಮೂಲ್ಯ ಮತ ನೀಡಬೇಕು ಮತದಾರ ಬಂಧು ಬಾಂಧವರೆ, ಅಕ್ಕತಂಗಿಯರೇ ಅಣ್ಣತಮ್ಮಂದಿರೆ..." ಅಂತ ಚೀರತೊಡಗಿತು. ಒಳಗಿದ್ದ ಇವಳೂ ಹೊರಬಂದು ನಿಂತಳು, ನಾ ಮುಂಜಾನೆ ಮುಂಜಾನೆ ಶಾಂತಿ ಹಾಳು ಮಾಡಿದರೆಂದು ಸಿಟ್ಟಿನಿಂದ ನೋಡುತ್ತಿದ್ದರೆ, ಇವಳು ನಗುತ್ತಿದ್ದಳು.

"ಏನ್ ನಗ್ತಾ ಇದೀಯಾ?" ಅಂದೆ, ಮತ್ತೆ ನಗುತ್ತ ಒಳಗೆ ಹೋದ್ಲು. ನಾನೂ ಒಳಗೆ ಬಂದು ಕೂತು "ಚುನಾವಣೆ ಬಂದ್ರೆ ಸಾಕು.. ಈ ಲೌಡಸ್ಪೀಕರ ಉಪಯೋಗಿಸಬಾರದು ಅಂತ ಕಾನೂನು ಮಾಡಬೇಕು, ಆಗ ಚೆನ್ನಾಗಿರತ್ತೆ" ಅಂದೆ. "ನೀವೇ ಯಾಕೆ ಚುನಾವಣೆಗೆ ನಿಂತು ಗೆದ್ದು ಬಂದು ಕಾನೂನು ಮಾಡಬಾರದು" ಅಂತ ನಕ್ಕಳು. ಪಾಕಶಾಲೆಗೆ ಹೊಕ್ಕೆ, ಗ್ಯಾಸ ಕಟ್ಟೆ ಮೇಲೆ ಪ್ರತಿಷ್ಟಾಪಿತನಾದೆ, ಏನೋ ಬೋಗುಣಿಯಲ್ಲಿ ಹಾಕಿಟ್ಟು ತಿರುವುತ್ತಿದ್ಲು. "ಅಲ್ಲಾ ಚುನಾವಣೆ ಅಂದ್ರೆ ಏನು ಅಂತ ತಿಳಿದಿದೀಯಾ, ಎನ್ ಈ ಸೌಟು ತಿರುವಿದ ಹಾಗಾ?, ನಾ ಚುನಾವಣೆಗೆ ನಿಂತರೆ ಅಷ್ಟೇ..." ಅಂದೆ, "ಎನೀಗ ನಿಮಗೇನು ಚುನಾವಣೆಗೆ ನಿಲ್ಲೋಕೆ" ಅಂದ್ಲು "ಅದಕ್ಕೂ ಅರ್ಹತೆ ಬೇಕೆ" ಅಂದೆ "ಏನು ಅರ್ಹತೆ ಹಾಂ, ಒಂದು ಅರ್ಹತೆ ನಿಮಗಿದೆ ಮೊದ್ಲೇ, ಗುಡಾಣದಂತಾ ಹೊಟ್ಟೆ!" ಅಂತ ಮುಗುಳ್ನಕ್ಕಳು. "ಲೇ ಹೋಗೀ ಹೋಗೀ ನನ್ನ ಹೊಟ್ಟೇ ಮೇಲೆ ಯಾಕೇ ನಿನ್ನ ಕಣ್ಣು" ಅಂತ ಕಿವಿ ಹಿಂಡಿದೆ. ಚೀರಿದ್ಲು. ಕೈಬಿಟ್ಟೆ, ಗ್ಯಾಸ ಆಫ್ ಮಾಡಿ ಹೊರಬಂದ್ಲು. "ನಾಯಕರೇ ಹೊರಬನ್ನಿ" ಅಂದ್ಲು "ಏನ ನಾಯಿ ಕರು ಅಂತೀದೀಯಾ, ನಾಯಕರೆಲ್ಲ ನಾಯಿ ಕರುಗಳೇ ಬಿಡು" ಅಂತನ್ನುತ್ತ ಹೊರಬಂದೆ. ಇನ್ನೇನು ಆರಾಮ ಕುರ್ಚಿಯಲ್ಲಿ ಕೂರಬೇಕೆನುವಷ್ಟರಲ್ಲಿ ಇವಳು ಆಕ್ರಮಿಸಿಬಿಟ್ಲು. "ಲೇ ಜಾಗ ಬಿಡೇ ಕೂರಬೇಕು" ಅಂದ್ರೆ. "ಇಲ್ಲೇನು ಕುರ್ಚಿಗಾಗಿ ಜಗಳಾಡ್ತೀರಾ ದಿಲ್ಲೀಲೀ ಅಸೆಂಬ್ಲೀನಲ್ಲಿ ಕುರ್ಚಿಗಾಗಿ ಹೋರಾಡಿ" ಅಂತ ಬಾಣ ಬಿಟ್ಲು. ಇವಳು ನನ್ನ ಚುನಾವಣೆಗೆ ನಿಲ್ಲಿಸಿಯೇ ಕೈಬಿಡುವ ಹಾಗೆ ಕಾಣ್ತಿದೆ. ಅವಳನ್ನು ಸ್ವಲ್ಪ ಆಕಡೆ ತಳ್ಳಿ ಅದರಲ್ಲೇ ಜಾಗ ಮಾಡಿಕೊಂಡು ನಾನೂ ಕೂತುಕೊಂಡೆ, ಮೈತ್ರೀ ಸರ್ಕಾರ ಸೀಟು ಹಂಚಿಕೊಂಡಂತೆ. "ಮುಖ್ಯಮಂತ್ರಿಯ ಪತ್ನಿ ಅನ್ನಿಸಿಕೋಬೇಕಿದೇಯಾ" ಅಂದೆ "ನನಗೆ ಅದೆಲ್ಲ ಬೇಡ ಹೋಮ್ ಮಿನಿಸ್ಟರೀ ಸಾಕು" ಅಂದ್ಲು. ಅಲ್ಲಾ **ನಾನೇ ಇನ್ನೂ ಚುನಾವಣೆಗೆ ನಿಂತಿಲ್ಲ, ಆಗಲೇ ಇವಳು ಗೃಹಖಾತೆ ಮೇಲೆ ಕಣ್ಣೀಟ್ಟಿದಾಳಲ್ಲ** ಭಲೇ ಅಂತ "ನಿನಗ್ಯಾಕೆ ಮಂತ್ರಿಗಿರಿ ಎಲ್ಲಾ" ಅಂದ್ರೆ "ರೀ ಹೋಮ್ ಮಿನಿಸ್ಟರೀ ಅಂದ್ರೆ ಮನೆ ಕೆಲ್ಸಾ" ಅಂತ ಸಬೂಬು ಹೇಳಿದ್ಲು.

"ನಾ ಚುನಾವಣೆಗೆ ನಿಂತರೆ ಯಾರೇ ಓಟು ಹಾಕ್ತಾರೆ" ಅಂದೆ, "ಒಂದು ಓಟಂತೂ ಗ್ಯಾರಂಟೀ" ಅಂದ್ಲೂ "ಓಹ್ ನಿಂದಾ" ಅಂದೆ, "ಯೇ ಇಲ್ಲಾಪ್ಪಾ, ಸೀರೆ ಬಂಗಾರ ಎನಾದ್ರೂ ಕೊಟ್ಟು ಮನೆಗೆ ಟೀವೀ ಕೊಟ್ರೆ ಮಾತ್ರ ನಾ ಓಟು ಹಾಕೊದು". "ಆಹಾ ಆಸೆ ನೋಡು" ಅಂತ ತಿವಿದೆ. "ಮತ್ತಿನ್ನೇನ್ರೀ ಈಗೆಲ್ಲಾ ಚುನಾವಣೆ ಅಂದ್ರೆ ಸುಮ್ನೆನಾ ಮನೆಗ ಬಂದು ಅರಿಷಿಣ ಕುಂಕುಮಾ ಹಚ್ಚಿ ಸೀರೆ ಕೊಟ್ಟು ಟೀವೀ ಎಲ್ಲಾ ಕೊಡ್ತಾರೆ, ನಿಮ್ಮ ಮತ ಅತ್ಯಮೂಲ್ಯ ಅಂತ, ಸುಮ್ನೇನಾ ಹೇಳ್ತಾರೆ" ಅಂತ ತಿರುಗು ಬಿದ್ಲು. "ಲೇ ನಾ ನಿಂತರೆ ನಿಯತ್ತಿಂದಾ ಮತ ಕೇಳ್ತಿನಿ" ಅಂದೆ. "ಅಂದ್ರೆ ಒಂದೇ ಓಟು ಅಷ್ಟೇ" ಅಂದ್ಲು. "ನಂದೊಂದೇ ಓಟು ಅಲ್ವಾ" ಅಂದೆ ಮತ್ತೆ ಮನಸು ಕರಗಿ ತಾನೂ ಓಟು ನಿಮಗೆ ಹಾಕ್ತೀನೀ ಅಂತಾಳೇನೊ ಅಂತ. "ನಿಮ್ಮದಲ್ಲಾರೀ, ನೀವು ಮೊದಲೇ ವಾಜಪೇಯೀ ಅಭಿಮಾನಿ, ನೀವ ಅವರ ಪಾರ್ಟಿಯಿಂದ ಯಾರು ನಿಲ್ತಾರೆ ಅವರಿಗೇ ಹಾಕಿ ಬರ್ತೀರಾ, ನಿಮ್ಮ ಓಟೂ ನಿಮಗಿಲ್ಲಾ" ಅಂದ್ಲು. "ಲೇ ವಾಜಪೇಯಿ ವ್ಯಕ್ತಿತ್ವ ಅಂದ್ರೆ ನನಗೆ ಅಷ್ಟು ಇಷ್ಟ ಕಣೇ, ಅವರನ್ನು ಬೇರೆ ಪಕ್ಷದವರೂ ಇಷ್ಟ ಪಡ್ತಾರೆ, ಆದ್ರೆ ನನ್ನ ಓಟು ನನಗೇ" ಅಂದೆ. "ಹಾಗಾದ್ರೆ ಎರಡು ಓಟು ಗ್ಯಾರಂಟಿ" ಅಂದ್ಲು. "ಓಹ ಒಂದು ನಂದು ಇನ್ನೊಂದು ನಿಂದು, ನಂಗೊತ್ತಿತ್ತು ನೀನ್ ನನಗೇ ಓಟು ಹಾಕ್ತೀಯಾ ಅಂತಾ" ಅಂತ ಚುನಾವಣೇಲೀ ಗೆದ್ದೇ ಬಂದೆನೇನೂ ಅನ್ನೋವಂತೆ ಮುಖ ಇಷ್ಟಗಲ ಮಾಡಿಕೊಂಡು ಹಲ್ಲು ಗಿಂಜಿದೆ. "ರೀ ನಂದು ಅಂತ ನಾನೆಲ್ಲಿ ಹೇಳಿದೆ, ಅದು ಪಕ್ಕದ ಮನೆ ಪದ್ದೂದೂ, ನಿಮ್ಮ ದೊಡ್ಡ ಫ್ಯಾನ್ ಅಲ್ವಾ ನೀವು ಕೇಳದಿದ್ರೂ ನಿಮ್ಗೇ ಓಟು ಹಾಕ್ತಾಳೆ" ಅಂದ್ಲು, ವಿಶ್ವಾಸಮತದಲ್ಲಿ ಸರ್ಕಾರ ಉರುಳಿದಾಗ ಸೋತ ಮಂತ್ರಿಯ ಥರ ಆಗಿತ್ತು ನನ್ನ ಮುಖಾ, ಸಿಗಬಹುದಾಗಿದ್ದ ಸ್ವಂತ ಪಾರ್ಟಿಯ ಒಂದು ಮತ ಸಿಗಲಿಲ್ಲವಲ್ಲ, ಸಿಕ್ಕರೆ ಸರ್ಕಾರ ಉರುಳುತ್ತಿರಲಿಲ್ಲವಲ್ಲ ಅನ್ನೋ ಹಾಗೆ.

"ನಾ ಚುನಾವಣೆಗೆ ನಿಂತು ಏನಾಗಬೇಕಿದೆ ಹೋಗು, ಬೀಳೊದೇ ಎರಡು ಓಟು ಅಂದಮೇಲೆ" ಅಂತ ಎದ್ದೆ, ಎಳೆದು ಕೂರಿಸಿಕೊಂಡ್ಲು, ಪಕ್ಷ ಬಿಟ್ಟು ಹೋಗುತ್ತೀನೆನ್ನುವವನಿಗೆ ಏನೊ ಖಾತೆ ಕೊಟ್ಟು ಕೂರಿಸಿದಂತೆ. "ನಾನೂ ನಿಮಗೇ ಓಟು ಹಾಕ್ತೀನಿ ಆಯ್ತಾ" ಅಂದ್ಲು, "ಸಿಗೋ ಮೂರು ಓಟಿಗೆ ಚುನಾವಣೆಗೆ ನಿಲ್ಬೇಕಾ ಠೇವಣಿ ಕಳ್ಕೋತೀನೀ ಅಷ್ಟೇ" ಅಂದೆ. "ರೀ, ನಿಮ್ಮ ಬ್ಲಾಗಿನಲ್ಲಿ ಓಟು ಹಾಕಿ ಅಂತ ಪ್ರಚಾರಾ ಮಾಡೋಣ ಬಹಳ ಓಟು ಬರ್ತವೆ" ಅಂದ್ಲು. "ರಾತ್ರಿ ನಿದ್ದೆಗೆಟ್ಟು ಬರೆದಿರೋ **ಲೇಖನಕ್ಕೇ ಇಪ್ಪತ್ತು ಕಾಮೆಂಟು ಬರಲ್ಲ, ಇನ್ನು ಓಟು ಬರ್ತಾವಾ**, ಚುನವಣೆಗೆ ನಿಂತೆ ಅಂದ್ರೆ ಬರೂ ನಾಲ್ಕು ಓದುಗರೂ ಕಮ್ಮಿಯಾಗಿ ಹೋಗ್ತಾರೆ ಅಷ್ಟೇ" ಅಂದೆ. "ಇರ್ಲಿ ಬಿಡಿ ಬೇರೆ ಪ್ರಚಾರಾ ಮಾಡೊಣಾ, ನಾನು ಮನೆಮನೆಗೆ ಹೋಗಿ ಮತ ಕೇಳ್ತೀನಿ" ಅಂದ್ಲು "ಅರಿಶಿಣ ಕುಂಕುಂಮ ಹಚ್ಚಿ ಸೀರೆ ಕೊಟ್ಟು ಮತ ಕೇಳ್ತೀಯಾ, ನಿನಗೇ ಒಂದು ಸೀರೆ ಕೊಡಿಸೋಕೆ ಆಗ್ತಿಲ್ಲ ನನ್ನ ಕೈಲಿ ಇನ್ನು ಎಲ್ರಿಗೂ!!!" ಅಂತ ನಿಟ್ಟುಸಿರು ಬಿಟ್ಟೆ. "ಏನಾದ್ರೂ ಮಾಡಿ ಪ್ರಚಾರ ಮಾಡೊಣ, ಲೌಡಸ್ಪೀಕರನಲ್ಲಿ, ಬಡವರ ಬಂಧು ಹಳೆಯದಾಯ್ತು... 'ಹುಡುಗಿಯರ ಹೃದಯ ಚೋರ, ಕನ್ಯೆಯರ ಕಲ್ಪನೆಯ ಹುಡುಗ, ಮಾತಿನ ಮಲ್ಲನಿಗೆ ನಿಮ್ಮ ಮತ' ಅಂತ ಹೊಸಾ ಸ್ಟೈಲಿನಲ್ಲಿ ಪ್ರಚಾರಾ ಮಾಡೋಣ ಎಲ್ಲಾ ಹುಡುಗೀರ್ ಓಟೂ ನಿಮ್ಗೇ" ಅಂತ ಬಾಂಬಿಟ್ಟಳು. "ಅಹಾಹಾ.. ಮೊದಲೇ ಹೇಳಬಾರದಿತ್ತಾ ಈ ಲೋಕಸಭೆಗೆ ನಿಂತ್ಕೊತಾ ಇದ್ದೆ, ನಾಮಿನೇಶನ ಟೈಮು ಆಗಿ ಹೋಯ್ತು, ಚುನಾವಣೇನೇ ಹತ್ರ ಬಂತು" ಅಂದೆ. "ಅಹಾ ಆಸೆ ನೋಡು, ರೀ ಮೊದ್ಲು ಬಡಾವಣೆಯ ಮುನ್ಸಿಪಲ್ ಕಾರ್ಪೊರೇಶನ್ನಿಗೆ ಆಯ್ಕೆ ಆಗಿ ಆಮೇಲೆ ಹಾಗೆ ಒಂದೊಂದೇ ಹೆಜ್ಜೆ" ಅಂದ್ಲು "ಓಹ್ ಹಾಗಾದ್ರೆ ನಾನು ಪ್ರಧಾನ ಮಂತ್ರಿ ಆಗೋಷ್ಟೊತ್ತಿಗೆ ಮುದುಕಾ ಆಗಿರ್ತೀನಿ" ಅಂದೆ. "ಇನ್ನೇನು ನೀವ್ ಗಾಂಧಿ ಮೊಮ್ಮಗನಾ, ಇಂದು ಹುಟ್ಟೀ ನಾಳೆ ಪ್ರಧಾನೀ ಆಗೋಕೇ, ಆ ಅದೃಷ್ಟ ನಿಮಗೆಲ್ಲಿ ಇಲ್ಲ ಬಿಡಿ" ಅಂದ್ಲು. "ಆಯ್ತು ನೀನು ಹೇಳಿದ ಹಾಗೆ ಆಗ್ಲಿ" ಅಂದೇ. "ಆಗ್ಲಿ ಅಂದ್ರೆ ಆಯ್ತಾ, ಬಡಾವಣೆಯಲ್ಲೇ ಜನರಿಗೆ ಹೆಲ್ಪ ಆಗೋ ಹಾಗೆ ಕೆಲ್ಸ ಮಾಡಬೇಕು, ನೀರು ಬರದಿದ್ರೆ, ಬರೋ ಹಾಗೆ ಮಾಡೋದು, ಕರೆಂಟು, ರೋಡು ಹೀಗೆ ಏನಾದ್ರೂ ಸಮಾಜ ಸೇವೆ ಮಾಡಿ ಹೆಸರು ಮಾಡ್ಬೇಕು ಆಮೇಲೇ ನಿಂತ್ಕೊಳ್ಳೊದು". "ಓಹ್ ಹೌದಾ, ನೀರು ಬಂದು ಮೂರು ದಿನಾ ಆಯ್ತಲ್ಲ, ಪಾಪ ಪಕ್ಕದ ಮನೆ ಪದ್ದೂಗೆ ತೊಂದ್ರೆ ಆಗಿರಬೇಕು ಹೆಲ್ಪ ಮಾಡಿ ಬರ್ಲಾ" ಅಂದೆ. "ಮೊದಲು ನಮ್ಮ ಮನೇಲಿ ನೀರಿಲ್ಲ ಅದನ್ನ ನೋಡಿ" ಅಂತ ದುರುಗುಟ್ಟಿದ್ಲು.

ಹತ್ತು ಕೊಡ ನೀರು ಹೊತ್ತು ತಂದು ಹಾಕಿದ್ದಾಯ್ತು, ಉಸ್ಸಪ್ಪಾ ಅಂತ ಕೂತೆ, "ಲೇ ಚುನಾವಣೆಗೆ ನಿಲ್ಲಕಾಗಲ್ಲ ಕಣೇ ಕೂತ್ಕೋಬಹುದಾ" ಅಂತ ಕಿಚಾಯಿಸಿದೆ, "ಗೆದ್ದು ಬಂದ ಮೇಲೆ ಸೀಟಿನಲ್ಲಿ ಕೂರೋದೇ ಇರ್ತದೆ, ಚುನಾವಣೆಲಾದ್ರೂ ನಿಂತೊಕೊಳ್ಳಿ ಅಂತಾ ಇರೋದು, ನೀತಿ ಸಂಹಿತೆ ಉಲ್ಲಂಘನೆ ಮಾಡೋಕೆ ಆಗಲ್ಲಾ" ಅಂತ ಅವಳು. "ಅಂದ ಹಾಗೆ ಯಾವ ಪಕ್ಷ ನಿಮ್ದು" ಅಂದ್ಲು. "ಪಕ್ಷನೂ ಇಲ್ಲ ಏನೂ ಇಲ್ಲ ಪಕ್ಷೇತರ ನಾನು" ಅಂದೆ. "ಹಾಗಾದ್ರೆ ಚಿಹ್ನೆ?"... "ಹೌದಲ್ವಾ, ಚಿಹ್ನೇ ಬೇಕು, ಹೂಂ.... ಕಂಪ್ಯೂಟರ್...." ಅಂತ ಹಲ್ಲುಕಿರಿದೆ. "ಯಾವಾಗ ನೋಡಿದ್ರೂ ಕಂಪ್ಯೂಟರ್.. ಅದನ್ನ ಚಿಹ್ನೆ ಮಾಡಿಕೊಂಡ್ರೆ, ಅಷ್ಟೇ ನಿಮ್ಮ (ಕೆಲವು)ಐಟೀನವ್ರು ನಾಲ್ಕು ಜನ ಓಟು ಹಾಕಬಹುದು, ಅದೂ ವೀಕೆಂಡು ಇದ್ರೆ ಮಾತ್ರ, ರೀ ಚಿಹ್ನೆ ಅಂದ್ರೆ ಹೇಗಿರಬೇಕು, ಗೌಡರ ಪಕ್ಷದ್ದು ನೋಡಿ, ಹೊರೆ ಹೊತ್ತ ಮಹಿಳೆ, ರೈತರು, ಮಹಿಳೆಯರು ಇಬ್ರನ್ನೂ ಹಿಡಿದುಕೊಂಡು ಬಿಟ್ರು, ಒಂದೇಟಿನಲ್ಲಿ ಎರಡು ಹಕ್ಕಿ, ಇನ್ನು ಹಸ್ತ, ಪೊಲಿಂಗ್ ಬೂತ್ ಮುಂದೆ ನಿಂತೂ ಕೈ ತೊರಿಸಿ, ನಮಗೇ ಮತ ಹಾಕಿ ಅಂತ ಕೇಳಬಹುದು, ಯಾವ ನೀತಿಸಂಹಿತೆಯೂ ಏನೂ ಮಾಡೋಕೆ ಆಗಲ್ಲ, ಇನ್ನು ಕಮಲ, ಕೆಸರಿನಲ್ಲಿ ಅರಳಿದ ಕಮಲ, ಈ ರಾಜಕೀಯ ಕೆಸರನಲ್ಲಿ ಅರಳಿದ ಹೂವು ನಾವು ಅಂತ ಹೇಳಿಕೊಳ್ಳಬಹುದು... ಹಾಗಿರಬೇಕು ಗುರುತು ಅಂದ್ರೆ" ಅಂತ ನೀತಿ ಬೋಧನೆ ಮಾಡಿದ್ಲು, ಇವಳೇನು ಯಾವ ರಾಜಕೀಯ ನಾಯಕರಿಗಿಂತ ಕಮ್ಮಿಯಿಲ್ಲ ಅನಿಸಿತು. "ಹಾಗಾದ್ರೆ, **ಕಂಪ್ಯೂಟರ ಆಪರೇಟ್ ಮಾಡುತ್ತಿರುವ ರೈತ**" ಹೇಗಿರ್ತದೆ ಅಂದೆ. ಬುಸುಗುಡುತ್ತ ನೋಡಿದ್ಲು... "ನೇಗಿಲು ಹೊತ್ತ ಸಾಫ್ಟವೇರ ಇಂಜನೀಯರು, ರಿಸೆಷನ್ ಟೈಮಿನಲ್ಲಿ ಚೆನ್ನಾಗಿರತ್ತೆ" ಅಂದೆ, ಅಟ್ಟಿಸಿಕೊಂಡು ಬಂದ್ಲು, ಓಡಾಡಿ ಸುಸ್ತಾಗಿ ಬಂದು ಕುಳಿತೆವು. "ರೀ ನಿಜವಾಗ್ಲೂ ಚುನಾವಣೆಗೆ ನಿಂತು ಹೀಗೆಲ್ಲ ಮಾಡಿದ್ರೆ" ಅಂದ್ಲು, "ನಿನ್ನ ಚುನಾವಣೇನೂ ಬೇಡಾ... ನಾ ನಿಲ್ಲೋದು ಬೇಡ.. ಮಲಗ್ತೀನಿ ಬಿಡು" ಅಂದೆ, "ಎದ್ದೇಳಿ ಯುವಕರೇ ದೇಶ ಕಟ್ಟಲು ಎದ್ದೇಳಿ" ಅಂತ ಎಬ್ಬಿಸಲು ಪ್ರಯತ್ನಿಸಿದ್ಲು, ನಾ ಏಳಲೇ ಇಲ್ಲ.

ಚುನಾವಣೆ ಅಂತಿದ್ದಂಗೆ ಹೇಸಿಗೆ ಬರುವಷ್ಟು ರಾಜಕೀಯ ಗಬ್ಬೆದ್ದು ಹೋಗಿದೆ, ಯಾರಾದ್ರೂ ಎಲ್ಲ ಒಮ್ಮೇಲೇ ಸರಿ ಮಾಡಲು ಹೋಗಬೇಕೆಂದ್ರೆ. ಕೊಳಚೆಗೆ ಫಿನಾಯ್ಲು ಸುರಿದಂತೇ ಸರಿ, ಕೊಳಚೆಗೇನೂ ಆಗಲ್ಲ, ಅದಕ್ಕೇ ಕೊಳಚೆ ಹರಿದು ಹೋಗಿ ಹೊಸ ಹರಿವು ಬರಬೇಕು, ಆಗ ಹೊಸ ತಿಳಿನೀರು ಎಲ್ಲ ತೊಳೆಯುತ್ತ ಹೋಗುತ್ತದೆ, ಇತ್ತೀಚೆಗೆ ಕೆಲವು ಪ್ರತಿಭಾನ್ವಿತರು, ನಿಜ ನಾಯಕರು ಹೊರಹೊಮ್ಮುತ್ತಿರುವುದೇ ಅದರ ಲಕ್ಷಣ, ಆದರೆ ಎಲ್ಲ ಸರಿಯಾಗುವವರೆಗೆ ಈ ಕೊಳಚೆ ಸ್ವಲ್ಪ ನಾರುವುದೇ...

ಮಧ್ಯಾಹ್ನ ಗಡದ್ದಾಗಿ ನಿದ್ದೆ ಹೊಡೆದು ಎದ್ದೆ, ಬಿಸಿಬಿಸಿ ಟೀ ಸಿಕ್ಕಿತ್ತು, ಮತ್ತೆ ಕೇಳಿದ್ಲು, "ಚುನಾವಣೆಗೆ ನಿಲ್ಲದಿದ್ರೂ ಸರಿ, ಓಟಾದ್ರೂ ಹಾಕ್ತೀರಲ್ವಾ" ಅಂತ... "ಏನಂತ ಹಾಕಲಿ, ಯಾರಿಗೆ ಹಾಕಲಿ, ಎಲ್ಲ ನಾಯಕರು, ನಾಲಾಯಕರೇ ನಿಂತಿದ್ದರೆ... ಈ ಪ್ರಶ್ನೆಗೆ ಉತ್ತರಿಸಿ ಅಂತ, ನಾಲ್ಕು ಆಯ್ಕೆ ಕೊಟ್ಟಿರ್ತಾರಲ್ಲ, ಅಲ್ಲಿ ಕೊನೇ ಆಯ್ಕೆ "ಮೇಲಿನದಾವೂದೂ ಅಲ್ಲ(none of the above)" ಅಂತ ಇರುತ್ತಲ್ಲ ಹಾಗೇ ಇಲ್ಲೂ "ಮೇಲಿನವರಾರೂ ಅಲ್ಲ" ಅಂತ ಕೊನೇ ಆಯ್ಕೆ ಅಂತಿದ್ದರೆ ಚೆನ್ನಾಗಿತ್ತು ಅದನ್ನೇ ಒತ್ತಿ ಬರುತ್ತಿದ್ದೆ" ಅಂದೆ ನಗುತ್ತಿದ್ಲು. "ಹೌದು ಹಾಗೆ ಮಾಡಿದ್ರೆ ಹೇಗಿರುತ್ತದೆ ಒಟ್ಟು ಮತದಾನದ ಪೈಕಿ ಅರ್ಧಕ್ಕಿಂತ ಜಾಸ್ತಿ ಪಡೆದರೆ ಮಾತ್ರ ಗೆಲುವು, ಹೆಚ್ಚಿಗೆ ಜನ "ಮೇಲಿನವರಾರೂ ಅಲ್ಲ" ಅಂದು ಯಾರೂ ಗೆಲ್ಲದಿದ್ರೆ, ಈಗ ನಿಂತವರು ಬಿಟ್ಟು ಮತ್ತೆ ಹೊಸಬರು ನಿಲ್ಲಬೇಕು ಅವರಲ್ಲಿ ಆಯ್ಕೆ ನಡೆಯಬೇಕು, ಹಾಗಿದ್ದರೆ ಹೇಗೆ, ಈ ರೀತಿ ಮಾಡಿದರೂ ಲೋಪದೋಷಗಳಿವೆ, ಎಷ್ಟು ಸಾರಿಯಂತ ಚುನಾವಣೆ ಮಾಡೊದು?, ಹಾಗೆ ಮತ್ತೆ ಹೊಸಬರು ನಿಲ್ಲದಿದ್ರೆ? ಆದರೂ ಏನೋ ಆಗ ಎಲ್ರೂ ಓಟು ಮಾಡಬಹುದು ಅಂತ ನನಗನ್ನಿಸುತ್ತದೆ, ಈಗ ಆಗುತ್ತಿರುವ ಐವತ್ತು ಅರವತ್ತು ಪ್ರತಿಶತಕ್ಕಿಂತ ಹೆಚ್ಚು ಮತಾದಾನವಾಗಬಹುದೇನೊ... ಬಹಳ ಜನರಿಗೆ ಓಟು ಹಾಕಬಾರದೆಂದಿಲ್ಲ, ಸರಿಯಾದ ಅಭ್ಯರ್ಥಿಗಳಿಲ್ಲದೇ ಓಟು ಹಾಕಲು ಮುಂದೆ ಬರುತ್ತಿಲ್ಲ ಅಷ್ಟೇ..." ಅಂದೆ. "ರೀ ಒಳ್ಳೇ ಭಾಷಣ ಮಾಡ್ತೀರ್‍ರೀ, ನೀವು ಚುನಾವಣೆಗೆ ನಿಂತರೆ..." ಅಂತ ಇವಳು ಮತ್ತೆ ಶುರುವಿಟ್ಟುಕೊಂಡ್ಲು...

ಹೀಗೇ ಬರುತ್ತಿರಿ, ಬ್ಲಾಗ್ ಬಂಧು ಬಾಂಧವರೇ!!! ಓಟು ಹಾಕದಿದ್ರೂ ಪರವಾಗಿಲ್ಲ, ಕಾಮೆಂಟಾದರೂ ನನಗೇ ಹಾಕಿ... :)

ಎಲ್ಲ ವಿಚಾರಗಳೂ ಕೇವಲ ಹಾಸ್ಯಕ್ಕಗಿ ಬರೆದಿದ್ದು, ಯಾರಿಗೂ ನೋವುಂಟು ಮಾಡುವ ಉದ್ದೇಶವಿರುವುದಿಲ್ಲ, ಇವೆಲ್ಲ ಕೇವಲ ಲೇಖಕರ ವೈಯಕ್ತಿಕ ಅಭಿಪ್ರಾಯಗಳು, ಎಲ್ಲರೂ ಒಪ್ಪಬೇಕೆಂದಿಲ್ಲ, ಇಷ್ಟವಾದರೆ ಓದಿ ಇಲ್ಲವಾದ್ರೆ, ಹುಚ್ಚು ಹುಡುಗನ ಹತ್ತು ಮಾತುಗಳೆಂದು ಮರೆತುಬಿಡಿ.

ಇಷ್ಟೊತ್ತು ಓದಿದ್ದು ಇಷ್ಟಾ ಆದ್ರೆ ಮೆಚ್ಚಿ, ಸಿಟ್ಟು ಬಂದಿದ್ರೆ ಚುಚ್ಚಿ ಇಂಚೆ (ಇ-ಅಂಚೆ) ಹಾಕಿ... ನನ್ನ ವಿಳಾಸ pm@telprabhu.com . ಹೀಗೆ ನೀವು ಓದಿ ಖುಶಿಯಾಗಿದ್ರೆ ನಿಮ್ಮ ಗೆಳೆಯರಿಗೂ ಇದನ್ನ ಕಳಿಸಿ, ಸಂತೋಷ ಇರೋದೇ ಹಂಚೋಕೆ ತಾನೆ...